ಶ್ರೀ ಬಿ. ಸೋಮಶೇಖರ್ (ಕಂದಾಯ ಸಚಿವರು) :

ಅ) ಯಾವುದೇ ತಾಲ್ಲೂಕನ್ನು ಬರಗಾಲ ಪೀಡಿತ ಎಂದು ಘೋಷಿಸಿರುವುದಿಲ್ಲ.

ಆ) 1997-98ರಲ್ಲಿ ಬರಗಾಲ ಪರಿಹಾರ ಉದ್ಯೋಗ ಸೃಜನೆ ಕಾಮಗಾರಿಗಳ ಸಲುವಾಗಿ ನವಲಗುಂದ ತಾಲ್ಲೂಕಿಗೆ ರೂ. 15.00 ಲಕ್ಷಗಳು ಹಾಗೂ ಧಾರವಾಡ ತಾಲ್ಲೂಕಿಗೆ ರೂ. 5.00 ಲಕ್ಷಗಳನ್ನು ಸರ್ಕಾರವು ಬಿಡುಗಡೆ ಮಾಡಿದೆ.

ಇ) ಹುಬ್ಬಳ್ಳಿ ತಾಲ್ಲೂಕಿನಲ್ಲಿ ಯಾವುದೇ ಬರ ಪರಿಹಾರ ಕಾಮಗಾರಿಗಳನ್ನು ಕೈಗೊಂಡಿಲ್ಲ.

ಹುಬ್ಬಳ್ಳಿ-ಧಾರವಾಡ ಮಹಾನಗರದಲ್ಲಿರುವ ಅನಧಿಕೃತ ಕಟ್ಟಡಗಳು

1956 - ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) : ಮಾನ್ಯ ನಗರಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿ - ಧಾರವಾಡ ಮಹಾನಗರದಲ್ಲಿ ಅನಧಿಕೃತ ವಸತಿ ವಿನ್ಯಾಸಗಳು ಮತ್ತು ಕಟ್ಟಡಗಳು ತಲೆ ಎತ್ತುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಅವುಗಳನ್ನು ತಡೆಯಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಬಿ.ಎನ್. ಬಚ್ಚೇಗೌಡ (ನಗರಾಭಿವೃದ್ಧಿ ಸಚಿವರು) :

ಅ) ಹೌದು.

ಆ) ಹುಬ್ಬಳ್ಳಿ--ಧಾರವಾಡ ಅವಳಿ ನಗರಗಳಲ್ಲಿ ಒಟ್ಟು 75 ವಿನ್ಯಾಸಗಳು ಅನಧಿಕೃತವಾಗಿ ನಿರ್ಮಾಣಗೊಂಡಿದ್ದು ಕರ್ನಾಟಕ ನಗರ ಪ್ರದೇಶಗಳಲ್ಲಿರುವ ಅನಧಿಕೃತ ನಿರ್ಮಾಣಗಳನ್ನು ಸಕ್ರಮಗೊಳಿಸುವ ಕಾಯ್ದೆ 1991ರನ್ವಯ ದಿನಾಂಕ 01-01-95ರ ಪೂರ್ವದಲ್ಲಿ ನಿರ್ಮಿಸಿದ ಅನಧಿಕೃತ ಕಟ್ಟಡಗಳನ್ನು ಸಕ್ರಮಗೊಳಿಸಲು ದಿನಾಂಕ: 31-12-95ಕ್ಕೂ ಮುಂಚೆ ಅರ್ಜಿ ಸಲ್ಲಿಸಿದ್ದರೆ ಅವುಗಳನ್ನು ಪರಿಗಣಿಸಲು ನಿಯಮಾವಳಿಗಳಲ್ಲಿ ಅವಕಾಶ ಇದೆ.

ಈ ನಿಯಮಗಳ ಪ್ರಕಾರ ಸದರೀ ಅರ್ಜಿಗಳ ವಿಲೇವಾರಿ ಕುರಿತು ಹಾಗೂ ಅನರ್ಹ ಕಟ್ಟಡಗಳನ್ನು ತೆಗೆದುಹಾಕುವ ಕುರಿತು ನೋಟೀಸ್‌ಗಳನ್ನು ಜಾರಿ ಮಾಡುವ ಕಾರ್ಯವು ಪ್ರಗತಿಯಲ್ಲಿದೆ.

ಸಮಾಜ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರತಕ್ಕ ಹುದ್ದೆಗಳ ಭರ್ತಿ.

1957- ಹೆಚ್. ಕೆ. ಕುಮಾರಸ್ವಾಮಿ : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಮಾಜ ಕಲ್ಯಾಣ ಇಲಾಖೆಯಲ್ಲಿ ಖಾಲಿಯಿರುವ ಎ,ಬಿ,ಸಿ, ಮತ್ತು ಡಿ ದರ್ಜೆಯ ನೌಕರರ ಸಂಖ್ಯೆ ಎಷ್ಟು?

ಅ) *ಹಾಗಿದ್ದಲ್ಲಿ ಸದರಿ ಹುದ್ದೆಗಳನ್ನು ಯಾವಾಗ ತುಂಬಲಾಗುವುದು?*

ಇ) *ಖಾಲಿ ಹುದ್ದೆಗಳನ್ನು ತುಂಬದಿರುವದರಿಂದ ಇಲಾಖೆ ಪ್ರಗತಿ ಕುಂಠಿತಗೊಂಡಿರುವುದು ನಿಜವೇ?*

ಶ್ರೀ ಕೆ.ಎಂ. ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು) :

ಅ) ಸಮಾಜ ಕಲ್ಯಾಣದ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳ ವಿವರ

1. ಗ್ರೂಪ್ ಎ	14
2. ಗ್ರೂಪ್ ಬಿ	87
3. ಗ್ರೂಪ್ ಸಿ	962
4. ಗ್ರೂಪ್ ಡಿ	649
ಒಟ್ಟು	**1712**

ಆ)

1. ***ಗ್ರೂಪ್ 'ಎ':*** ನೇರ ನೇಮಕಾತಿ ಹಾಗೂ ಮುಂಬಡ್ತಿಯಿಂದ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.

2. ***ಗ್ರೂಪ್ 'ಬಿ':*** ಖಾಲಿ ಇರುವ ಈ ವರ್ಗದ ಹುದ್ದೆಗಳು ನೇರ ನೇಮಕಾತಿಯಿಂದ ತುಂಬವಂತಹುದಾಗಿದ್ದು ಇಲಾಖಾ ವ್ಯಂದ ಮತ್ತು ನೇಮಕಾತಿ ನಿಯಮದಲ್ಲಿ ಒಳಪಡಿಸಿ ನೇರ ನೇಮಕಾತಿಯಿಂದ ಭರ್ತಿ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ.

3. ***ಗ್ರೂಪ್ 'ಸಿ' :*** ಶಿಕ್ಷಣ ಸಂಸ್ಥೆಗಳ 797 ಖಾಲಿ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡುವ ಬಗ್ಗೆ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಸ್ವೀಕರಿಸಲಾಗಿದ್ದು ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. 79 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ಕರ್ನಾಟಕ ಲೋಕ ಸೇವಾ ಆಯೋಗದಿಂದ ಭರ್ತಿ ಮಾಡುವ ಸದರಿ ಪ್ರಾಧಿಕಾರದಿಂದ ಅಭ್ಯರ್ಥಿಗಳ ಆಯ್ಕೆ ಪಟ್ಟಿಯನ್ನು ನಿರೀಕ್ಷಿಸಿದೆ. 84 ಬೆರಳಚ್ಚುಗಾರರು ಹಾಗೂ 2 ಶೀಘ್ರಲಿಪಿಗಾರರ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಶೀಘ್ರ ಲಿಪಿಗಾರರ ಮತ್ತು ಬೆರಳಚ್ಚುಗಾರರ ಪ್ರಾಧಿಕಾರದಿಂದ ಆಯ್ಕೆಯಾಗುವ ಅಭ್ಯರ್ಥಿಗಳ ಪಟ್ಟಿಯನ್ನು ನಿರೀಕ್ಷಿಸಿದೆ.

4. ***ಗ್ರೂಪ್ 'ಡಿ' :*** 75 ಗ್ರೂಪ್ ಡಿ ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡುವ ಕುರಿತಂತೆ ನೇಮಕಾತಿ ಪ್ರಾಧಿಕಾರಿಯವರಾದ ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಹಾಗೂ ಯೋಜನೆ ಸಮನ್ವಯಾಧಿಕಾರಿಗಳಿಗೆ. ಈಗಾಗಲೇ ಸೂಚನೆ ನೀಡಲಾಗಿದ್ದು ಅದರಂತೆ ಕ್ರಮ ಕೈಗೊಂಡಿರುತ್ತಾರೆ. 574 ಅಡಿಗೆಯವರ ಹುದ್ದೆಗಳನ್ನು ಮುಂಬಡ್ತಿಯಿಂದ ಭರ್ತಿ ಮಾಡುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ಇ) ಖಾಲಿ ಇರುವ ಹುದ್ದೆಗಳಲ್ಲಿ ಹೆಚ್ಚಿನ ವ್ಯವಸ್ಥೆಯ ಮೇಲೆ ಅಧಿಕಾರಿಗಳು ನೌಕರರು ಕಾರ್ಯ ನಿರ್ವಹಿಸುತ್ತಿರುವುದರಿಂದ ಇಲಾಖಾ ಕಾರ್ಯಕ್ರಮಗಳ ಪ್ರಗತಿ ಕುಂಠಿತವಾಗಿರುವುದಿಲ್ಲ.

ಹಾಸನ ಜಿಲ್ಲೆಯಲ್ಲಿ "ಹಸಲರು" ಪಂಗಡಕ್ಕೆ ಪ್ರಮಾಣ ಪತ್ರ

1958 - ಹೆಚ್. ಕೆ. ಕುಮಾರಸ್ವಾಮಿ (ಬೇಲೂರು) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಹಾಸನ ಜಿಲ್ಲೆಯಲ್ಲಿ 'ಹಸಲರು' ಎಂಬ ಪರಿಶಿಷ್ಟ ಪಂಗಡದವರು ದಶಕಗಳಿಂದ ದಕ್ಷಿಣ ಕನ್ನಡ ಜಿಲ್ಲೆಯಿಂದ ವಲಸೆ ಬಂದು ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಈ ವರ್ಗದವರಿಗೆ ಜಾತಿ ಪ್ರಮಾಣ ಪತ್ರ ನೀಡದಿರುವುದು ಗಮನಕ್ಕೆ ಬಂದಿದೆಯೇ?*

ಇ) *ಬಂದಿದ್ದಲ್ಲಿ ಜಾತಿ ಪ್ರಮಾಣ ಪತ್ರವನ್ನು ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ?*

ಶ್ರೀ ಕೆ.ಎಂ. ಕೃಷ್ಣಾರೆಡ್ಡಿ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಇಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಅಲ್ಪ ಸಂಖ್ಯಾತರು ನಡೆಸುತ್ತಿರುವ ವಿದ್ಯಾರ್ಥಿ ನಿಲಯಗಳು

1959 - ಶ್ರೀ ಕುಂಬೈ ಸುಂದರರಾವ್ (ಸುರತ್ಕಲ್) : ಮಾನ್ಯ ಹಿಂದುಳಿದ ವರ್ಗಗಳ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿ ಅಲ್ಪಸಂಖ್ಯಾತರ ವಿವಿಧ ವರ್ಗಗಳು ನಡೆಸುತ್ತಿರುವ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿ ಒದಗಿಸುವುದು)*

ಆ) *ಈ ವಿದ್ಯಾರ್ಥಿನಿಲಯಗಳಲ್ಲಿ ಸರ್ಕಾರದವರು ಸಹಾಯಧನ ನೀಡುತ್ತಿರುವ ವಿದ್ಯಾರ್ಥಿನಿಲಯಗಳ ಸಂಖ್ಯೆ ಎಷ್ಟು?*

ಇ) *1996-97 ಮತ್ತು 1997-98ನೇ ಸಾಲಿನಲ್ಲಿ ಇವುಗಳಿಗೆ ನೀಡಿದ ಸಹಾಯಧನದ ವಿವರಗಳೇನು?*

ಶ್ರೀ ಮಾಲೀಕಯ್ಯ ಗುತ್ತೇದಾರ್ (ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ರಾಜ್ಯದಲ್ಲಿ ಅಲ್ಪಸಂಖ್ಯಾತರ ವಿವಿಧ ವರ್ಗಗಳು ನಡೆಸುತ್ತಿರುವ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಯ ಅನುದಾನಿತ ವಿದ್ಯಾರ್ಥಿ ನಿಲಯಗಳ ಸಂಖ್ಯೆ 39 (ಜಿಲ್ಲಾವಾರು ಮಾಹಿತಿ ಅನುಬಂಧದಲ್ಲಿ ನೀಡಿದೆ).